ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ಡಿಸೆಂಬರ್ 23, 2015

# ನ್ಯಾಯಮೂರ್ತಿ ವಿ. ಎಸ್. ಮಳೀಮಠ್ ಅವರ ನಿಧನಕ್ಕೆ ಮುಖ್ಯಮಂತ್ರಿ ಶೋಕ

ಬೆಂಗಳೂರು, ಡಿಸೆಂಬರ್ 23 :

ಕರ್ನಾಟಕ ಹಾಗೂ ಕೇರಳ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಯಾಗಿ ಸೇವೆ ಸಲ್ಲಿಸಿದ್ದ ನ್ಯಾಯಮೂರ್ತಿ ಶ್ರೀ ವಿ. ಎಸ್. ಮಳೀಮಠ್ ಅವರ ನಿಧನಕ್ಕೆ ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

ಕಾವೇರಿ ಜಲ ವಿವಾದ ನ್ಯಾಯಾಲಯದಲ್ಲಿದ್ದ ಸಂದರ್ಭ. ಅತೀ ಕಿರಿಯ ವಯಸ್ಸಿನಲ್ಲೇ ಅಂದರೆ ಕೇವಲ 38 ವರ್ಷ ವಯೋಮಾನದವರಾಗಿದ್ದಾಗ ರಾಜ್ಯದ ಅಡ್ವೋಕೇಟ್ ಜನರಲ್ ಆಗಿ ನೇಮಕಗೊಂಡಿದ್ದ ಶ್ರೀ ವಿ. ಎಸ್. ಮಳೀಮಠ್ ಅವರು ಕಾವೇರಿ ಜಲ ವಿವಾದಕ್ಕೂ ಹಾಗೂ ಉಪ ನದಿ ಯೋಜನೆಗಳಿಗೂ ಸಂಬಂಧವಿಲ್ಲ ಎಂಬ ನಿಲುವು ತಾಳಿ ಕಬಿನಿ, ಹಾರಂಗಿ ಹಾಗೂ ಹೇಮಾವತಿ ನೀರಾವರಿ ಯೋಜನೆಗಳನ್ನು ರಾಜ್ಯದ ಅನುದಾನದಲ್ಲೇ ಪೂರ್ಣಗೊಳಿಸಲು ಅಭ್ಯಂತರವಿಲ್ಲ ಎಂಬ ಸಕಾಲಿಕ ಸಲಹೆಯನ್ನು ರಾಜ್ಯ ಸರ್ಕಾರಕ್ಕೆ ನೀಡಿದ್ದರು. ಇದರಿಂದ ರಾಜ್ಯದ ನೀರಾವರಿ ಯೋಜನೆಗಳಿಗೆ ಚಾಲನೆ ದೊರೆಯಿತಲ್ಲದೆ, ರೈತರಿಗೂ ಅನುಕೂಲವಾಯಿತು ಎಂಬುದು ಸ್ಮರಣಾರ್ಹ ಸಂಗತಿಯಾಗಿದೆ.

ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಯಾಗಿ ಎರಡು ವರ್ಷ ಹಾಗೂ ಕೇರಳ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಯಾಗಿ ಏಳು ವರ್ಷ ಪರಿಣಾಮಕಾರಿಯಾಗಿ ಸೇವೆ ಸಲ್ಲಿಸಿದ ಶ್ರೀ ಮಳೀಮಠ್ ಅವರು ಭಾರತ ಸರ್ವೋಚ್ಚ ನ್ಯಾಯಾಲಯಕ್ಕೆ ನೀಡಿದ ಬಡ್ತಿಯನ್ನೂ ನಿರಾಕರಿಸಿ, ಅಲ್ಲೇ ಉಳಿದದ್ದು ಇದೀಗ ಇತಿಹಾಸ.

ರಾಷ್ಟ್ರದ ವಿವಿಧ ನ್ಯಾಯಾಲಯಗಳಲ್ಲಿ ಬಾಕಿ ಪ್ರಕರಣಗಳನ್ನು ಕಡಿಮೆಗೊಳಿಸಲು ಕೇಂದ್ರ ಸರ್ಕಾರ ರಚಿಸಿದ್ದ ಸಮಿತಿಯ ಅಧ್ಯಕ್ಷರಾಗಿ, ಕೇಂದ್ರ ಆಡಳಿತ ಮಂಡಳಿಯ ಆಧ್ಯಕ್ಷರಾಗಿ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಸದಸ್ಯರಾಗಿ ಹಾಗೂ ಕರ್ನಾಟಕ ಕಾನೂನು ಆಯೋಗದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದ ಶ್ರೀ ಮಳೀಮಠ್ ಅವರು ಮಹಾಜನ್ ವರದಿಯ ಅನುಷ್ಠಾನದ ಬಗ್ಗೆ ಕಳಕಳಿ ಹೊಂದಿದ್ದರಲ್ಲದೆ, ನ್ಯಾಯಾಂಗ ಸುಧಾರಣೆಯಲ್ಲಿ ಅತೀವ ಆಸಕ್ತಿ ಹೊಂದಿದ್ದರು ಎಂದು ಶ್ರೀ ಸಿದ್ದರಾಮಯ್ಯ ಅವರು ತಮ್ಮ ಸಂದೇಶದಲ್ಲಿ ಬಣ್ಣಿಸಿದ್ದಾರೆ.

*********

ಡಿ ಪಿ ಎಂ